## Social Service Scheme Details

## ಸಾಮಾಜಿಕ ಭದ್ರತಾ ಯೋಜನೆಗಳು

ಪ್ರಪಂಚದ ಜನಸಂಖ್ಯೆಯಲ್ಲಿ 1/3 ಭಾಗದಷ್ಟು ಮಂದಿ ದಾರುಣವಾದ ಬಡತನದ ಸಂಕಷ್ಟಕ್ಕೆ ಸಿಲುಕಿ ತೀರಾ ಹಿಂದುಳಿದ ಪ್ರದೇಶಗಳಲ್ಲಿ ವಾಸಿಸುತ್ತಿದ್ದು, ಶಿಕ್ಷಣವಿಲ್ಲದೆ ಅನಾರೋಗ್ಯ ಮುಂತಾದ ತೊಂದರೆಗಳನ್ನು ಎದುರಿಸುತ್ತಿದ್ದಾರೆ. ಇಂತಹವರಿಗೆ ಆರ್ಥಿಕ ರಕ್ಷಣೆ ಹಾಗೂ ಸಾಮಾಜಿಕ ನ್ಯಾಯ ದೊರಕಿಸಿ ಸಮಾಜದ ಮುಖ್ಯವಾಹಿನಿಗೆ ತರುವಲ್ಲಿ ಸಾಮಾಜಿಕ ಭದ್ರತಾ ಯೋಜನೆಗಳ ಪಾತ್ರ ಅತ್ಯಂತ ಪ್ರಮುಖವಾಗಿರುತ್ತವೆ.

ವೃದ್ಧಾಪ್ಯ, ಕಾಯಿಲೆಗಳು, ಗರ್ಭಾವಸ್ಥೆ, ನಿರುದ್ಯೋಗ, ಅಂಗವಿಕಲತೆ, ಇತರೇ ಕಾರಣಗಳಿಂದ ಉಂಟಾಗುವ ಆರ್ಥಿಕ ಹಾಗೂ ಸಾಮಾಜಿಕ ಸಂಕಷ್ಟಗಳಿಂದ ಸಮಾಜದ ಸದಸ್ಯರಿಗೆ ಸಾರ್ವತ್ರಿಕ ಪರಿಹಾರದ ಮೂಲಕ ಒದಗಿಸುವ ಭದ್ರತೆ ಎಂಬುದಾಗಿ ಅಂತರಾಷ್ಟ್ರೀಯ ಕಾರ್ಮಿಕರ ಸಂಸ್ಥೆಯು ಸಾಮಾಜಿಕ ಭದ್ರತೆ ಯೋಜನೆಗಳ ಕುರಿತು ಅರ್ಥೈಸಿದೆ.

ಭಾರತ ಸಂವಿಧಾನದ ನಿರ್ದೇಶಿತ ತತ್ವ (Directive Principle) ದ 41 ಹಾಗೂ 42ನೇ ವಿಧಿಚ್ಛೇಧವು ಅಸಹಾಯಕ, ಅಶಕ್ತ ಹಾಗೂ ದುರ್ಬಲ ವರ್ಗದವರ ರಕ್ಷಣೆಯು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಸಮವರ್ತಿ ಹೊಣೆಯೆಂದು ಹೇಳುತ್ತದೆ. ನಿರ್ಧಿಷ್ಠವಾಗಿ 41ನೇ ವಿಧಿಚ್ಛೇದದಂತೆ ವೃದ್ಧರು, ಅನಾರೋಗ್ಯದಿಂದ ನರಳುತ್ತಿರುವವರು, ಅಂಗವಿಕಲರು, ನಿರುದ್ಯೋಗಿಗಳು ಹಾಗೂ ಇತರೇ ಕಾರಣಗಳಿಂದ ಬಡತನದ ಬವಣೆಯಲ್ಲಿರುವವರಿಗೆ ತನ್ನ ಆರ್ಥಿಕ ಸಾಮರ್ಥ್ಯದೊಳಗೆ ನೆರವು ನೀಡುವುದು ಹಾಗೂ ಅವರ ಸಾಮಾಜಿಕ ಸ್ಥಿತಿಯಲ್ಲಿ ಸುಧಾರಣೆ ತರುವುದು ರಾಜ್ಯ ಸರ್ಕಾರದ ಆಧ್ಯ ಕರ್ತವ್ಯವಾಗಿರುತ್ತದೆ.

ಬಡತನ, ನಿರ್ಗತಿಕತೆ ಹಾಗೂ ಅನಿಶ್ಚಿತ ಪರಿಸ್ಥಿತಿಗಳನ್ನು ನಿಭಾಯಿಸಲು ಸಮಾಜದಲ್ಲಿ ಬವಣೆಗೆ ತುತ್ತಾಗುವ ಜನ ಸಮುದಾಯಕ್ಕೆ ರಕ್ಷಣೆಯನ್ನು ಹಾಗೂ ಸಾಮಾಜಿಕ ನ್ಯಾಯವನ್ನು ನಿರಂತರವಾಗಿ ಒದಗಿಸುವುದು ಸರ್ಕಾರಕ್ಕೆ ಅನಿವಾರ್ಯವಾಗುತ್ತಲೇ ಹೋಗುತ್ತದೆ.

## ಸಾಮಾಜಿಕ ಭದ್ರತೆಯ ಸಂಕ್ಷಿಪ್ತ ಇತಿಹಾಸ:-

1880 ನೇ ಇಸವಿಯಲ್ಲಿ ಚಾನ್ಸೆಲರ್ ಆಟೋವನ್ ಬಿಸ್ಮಾರ್ಕ್, ಜರ್ಮನಿಯ ದುರ್ಬಲ ಹಾಗೂ ಅಸಹಾಯಕ ಜನತೆಗಾಗಿ ಸಾಮಾಜಿಕ ಕಾರ್ಯಕ್ರಮಗಳನ್ನು ಜಾರಿಗೆ ತಂದರು. ಯೂರೋಪಿಯನ್ ದೇಶಗಳು ತಮ್ಮ ಜನತೆಯ ಏಳಿಗೆಗಾಗಿ ಈ ಕಾರ್ಯಕ್ರಮವನ್ನು ಅಳವಡಿಸಿಕೊಂಡವು. ತದನಂತರ ಅಮೇರಿಕಾ ಸಂಯುಕ್ತ ಸಂಸ್ಥಾನದ ಅಧ್ಯಕ್ಷ ಫ್ರಾಂಕ್ಲಿನ್ ರೂಸ್‌ವೆಲ್ಟ್ , ಸಾಮಾಜಿಕ ಭದ್ರತಾ ಕಾನೂನನ್ನು 1935 ನೇ ಇಸವಿಯಲ್ಲಿ ದೇಶವನ್ನು ಅತ್ಯಂತ ವಿಷಮ ಆರ್ಥಿಕ ಸಂಕಷ್ಟದಿಂದ ( ದಿ ಗ್ರೇಟ್ ಡಿಪ್ರೆಷನ್ ) ಪಾರು ಮಾಡಲು ಜಾರಿಗೆ ತಂದರು.

ಕರ್ನಾಟಕ ರಾಜ್ಯ ಸರ್ಕಾರವು ಅಶಕ್ತ ವೃದ್ಧರ ರಕ್ಷಣೆಗಾಗಿ 1965 ನೇ ಇಸವಿಯಿಂದ ರೂ.40-00 ರಂತೆ ಮಾಸಿಕ ಪಿಂಚಣಿಯನ್ನು ನೀಡುತ್ತಾ ಬಂದಿದೆ. ಅಲ್ಲದೆ ಅಂಗವಿಕಲರ ಸಾಮಾಜಿಕ ಭದ್ರತೆಗಾಗಿ 1979 ರಲ್ಲಿ ಹಾಗೂ ನಿರ್ಗತಿಕ ವಿಧವರೆಯರ ರಕ್ಷಣೆಗಾಗಿ 1984ರಲ್ಲಿ ರೂ.40-00 ರಂತೆ ಮಾಸಿಕ ಪಿಂಚಣಿಯನ್ನು ಜಾರಿಗೆ ತಂದಿದೆ.

ಕೇಂದ್ರ ಸರ್ಕಾರವು ರಾಜ್ಯ ಸರ್ಕಾರಗಳ ನೆರವಿನೊಂದಿಗೆ ರಾಷ್ಟ್ರೀಯ ಸಾಮಾಜಿಕ ನೆರವು ಯೋಜನೆಗಳನ್ನು ( ಎನ್‌ಎಸ್‌ಎಪಿ) ಅನುಷ್ಠಾನಗೊಳಿಸಿದೆ. ಈ ಮಹತ್ವದ ಯೋಜನೆಯಡಿ ನಾಲ್ಕು ಪ್ರಮುಖ ಸಾಮಾಜಿಕ ಭದ್ರತಾ ಯೋಜನೆಗಳಿವೆ.

1) ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ಯೋಜನೆ.
2) ರಾಷ್ಟ್ರೀಯ ಕುಟುಂಬ ನೆರವು ಯೋಜನೆ
3) ಅನ್ನಪೂರ್ಣ ಯೋಜನೆ
4) ಜನನಿ ಶಿಶು ಸುರಕ್ಷಾ ಯೋಜನೆ.

ಇದಲ್ಲದೆ ಕರ್ನಾಟಕ ರಾಜ್ಯ ಸರ್ಕಾರವು ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಿದೆ.

1) ಅಂತ್ಯ ಸಂಸ್ಕಾರ ಯೋಜನೆ
2) ಆದರ್ಶ ವಿವಾಹ ಯೋಜನೆ
3) ದೇವದಾಸಿ ಪಿಂಚಣಿ
4) ಸಂಧ್ಯಾ ಸುರಕ್ಷಾ ಯೋಜನೆ

**<u>ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ</u>**

ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯವು ಈ ಕೆಳಕಂಡ ಯೋಜನೆಗಳಿಗೆ ಸಂಬಂಧಿಸಿದಂತೆ ಕಾರ್ಯ ನಿರ್ವಹಿಸುತ್ತದೆ.

1) ಇಂದಿರಾಗಾಂಧಿ ರಾಷ್ಟ್ರೀಯ ವೃದ್ದಾಪ್ಯ ಯೋಜನೆ
2) ವಿಧವಾ ಪಿಂಚಣಿ ಯೋಜನೆ
3) ವಿಕಲಾಂಗ ಪಿಂಚಣಿ
4) ಸಂಧ್ಯಾ ಸುರಕ್ಷಾ ಯೋಜನೆ
5) ದೇವದಾಸಿ ಪಿಂಚಣಿ ಯೋಜನೆ
6) ಅಂತ್ಯ ಸಂಸ್ಕಾರ ಸಹಾಯ ಧನ ಯೋಜನೆ
7) ಅನ್ನಪೂರ್ಣ ಯೋಜನೆ
8) ರಾಷ್ಟ್ರೀಯ ಕುಟುಂಬ ನೆರವು ಯೋಜನೆ
9) ಆದರ್ಶ ವಿವಾಹ ಯೋಜನೆ

**<u>ನಿರ್ದೇಶನಾಲಯದ ಧ್ಯೇಯೋಧ್ದೇಶಗಳು</u>**

1. ವಿವಿಧ ಇಲಾಖೆಗಳಲ್ಲಿರುವ ಸಾಮಾಜಿಕ ಭದ್ರತೆ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ಮೇಲ್ವಿಚಾರಣೆ ಹಾಗೂ ಅನುಷ್ಠಾನಗೊಳಿಸುವ ಮತ್ತು ಕಾರ್ಯಗತಗೊಳಿಸುವ ಇಲಾಖೆಗಳ ಮಧ್ಯೆ ಸಮನ್ವಯ ಸಾಧಿಸುವುದು.
2. ವಿವಿಧ ಯೋಜನೆಗಳ ಫಲಾನುಭವಿಗಳಿಗೆ ಸಂಬಂಧಿಸಿದಂತೆ ಮಾಹಿತಿಯನ್ನು ಅವರ ಭಾವಚಿತ್ರ ದೊಂದಿಗೆ ಕ್ರೋಢೀಕರಿಸುವುದು ಹಾಗೂ ಬಯೋಮೆಟ್ರಿಕ್ಸ್ ತಂತ್ರವನ್ನು ಅಳವಡಿಸುವುದು.
3. ವಿವಿಧ ಯೋಜನೆಗಳಿಗಾಗಿ ಸರ್ಕಾರ ನಿಗಧಿಪಡಿಸಿರುವ ಸಂಚಿತ ನಿಧಿಯನ್ನು ನಿಯಂತ್ರಿಸುವುದು.
4. ಸಾಮಾಜಿಕ ಭದ್ರತಾ ಪಿಂಚಣಿ ಯೋಜನೆಗಳ ಅಡಿಯಲ್ಲಿ ಗುರುತಿಸಿರುವ ಫಲಾನುಭವಿಗಳಿಗೆ ಗುರುತಿನ ಚೀಟಿ ನೀಡುವುದು.

5. ಕೇಂದ್ರ ಸರ್ಕಾರದ ಅನುದಾನವನ್ನು ನಿಯಮಿತವಾಗಿ ಸದುಪಯೋಗಪಡಿಸಿಕೊಳ್ಳುವುದು ಹಾಗೂ ಈ ಬಗ್ಗೆ ಕೇಂದ್ರ ಸರ್ಕಾರಕ್ಕೆ ಕಾಲಕಾಲಕ್ಕೆ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸುವುದು.
6. ಯೋಜನೆಗಳ ಸಫಲತೆಯನ್ನು ವಿಶ್ಲೇಷಿಸುವುದು ಹಾಗೂ ಸರ್ಕಾರಕ್ಕೆ ಬೇಕಾದ ವಿಶ್ಲೇಷಣಾ ವರದಿಯನ್ನು ತಯಾರಿಸುವುದು.
7. ಫಲಾನುಭವಿಗಳ ವೈಯಕ್ತಿಕ ಖಾತೆಯನ್ನು ಅಂಚೆ ಕಛೇರಿ ಹಾಗೂ ಬ್ಯಾಂಕ್‌ಗಳಲ್ಲಿ ತೆರೆದು ಕಾಲಕಾಲಕ್ಕೆ ಸರಿಯಾಗಿ ಪಿಂಚಣಿಯನ್ನು ತಲುಪುವಂತೆ ನೋಡಿಕೊಳ್ಳುವುದು.

## ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ ಯೋಜನೆ

ಚಾಲ್ತಿಯಲ್ಲಿದ್ದ ರಾಷ್ಟ್ರೀಯ ವೃದ್ಧಾಪ್ಯ ವೇತನದ ನಿಯಮಗಳನ್ನು ಬದಲಾಯಿಸಿ 19-11-2007 ರಿಂದ ಕೇಂದ್ರ ಸರ್ಕಾರವು ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ ಯೋಜನೆಯನ್ನು ಜಾರಿಗೆ ಬಂದಿದೆ. ಈ ಯೋಜನೆಯ ಅನ್ವಯ.

1. ಫಲಾನುಭವಿಗಳು 65 ವರ್ಷ ಹಾಗೂ ಮೇಲ್ಪಟ್ಟ ವಯಸ್ಸುಳ್ಳವರಾಗಿರಬೇಕು. ಅವರು ಬಡತನ ರೇಖೆಗಿಂತ ( ಬಿಪಿಎಲ್ ) ಕೆಳಗಡೆ ಇರಬೇಕು.
2. ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯಿತಿರಾಜ್ ಮಂತ್ರಾಲಯವು, ಬಡತನ ರೇಖೆಗಿಂತ ಕೆಳಗಿರುವವರನ್ನು ಗುರುತಿಸಲು ಕುಟುಂಬದ ಶೈಕ್ಷಣಿಕ , ಸಾಮಾಜಿಕ ಹಾಗೂ ಆರ್ಥಿಕ ಸ್ಥಿತಿಗತಿಗಳ ಬಗ್ಗೆ 13 ಅಂಶಗಳನ್ನು ನಿಗಧಿಪಡಿಸಿದೆ. ಪ್ರತಿಯೊಂದು ಅಂಶಕ್ಕೆ 0-4 ಅಂಕಗಳನ್ನು ನಿಗಧಿಪಡಿಸಲಾಗಿದೆ. ಅದರಂತೆ 26 ಅಂಕಗಳು ಅಥವಾ ಅದಕ್ಕಿಂತ ಕಡಿಮೆ ಅಂಕಗಳನ್ನು ಪಡೆದ ಕುಟುಂಬಗಳನ್ನು ಬಡತನದ ರೇಖೆಗಿಂತ ಕೆಳಗಿದೆ ಎಂದು ಪರಿಗಣಿಸುವುದು.
3. ಅಂತಹ ವ್ಯಕ್ತಿಗಳು ವಿಧವಾ ವೇತನ, ಅಂಗವಿಕಲ ವೇತನ, ಸಂಧ್ಯಾ ಸುರಕ್ಷಾ ಯೋಜನೆಯಡಿ ಯಾವುದೇ ತರಹದ ಪಿಂಚಣಿ ಇತ್ಯಾಧಿಗಳನ್ನು ಸಾರ್ವಜನಿಕ ಅಥವಾ ಖಾಸಗಿ ಮೂಲಗಳಿಂದ ಪಡೆಯುತ್ತಿರಬಾರದು.
4. ಮಾಸಿಕ ರೂ.400-00 ಗಳ ಮಾಸಾಶನಗಳನ್ನು ನೀಡಲಾಗುತ್ತದೆ.
5. ಫಲಾನುಭವಿಗಳಿಗೆ ಗಂಡು ಮಕ್ಕಳು ಇದ್ದಾಗ್ಯೂ ಅವರು ಫಲಾನುಭವಿಗಳನ್ನು ಪೋಷಿಸದೆ ಇದ್ದಲ್ಲಿ ಈ ಮಾಸಾಶನವನ್ನು ಪಡೆಯಬಹುದಾಗಿದೆ.
6. ಜನನ ಪ್ರಮಾಣ ಪತ್ರ, ವೈದ್ಯಕೀಯ ದೃಢೀಕರಣ ಪತ್ರ ಅಥವಾ ಭಾರತ ಚುನಾವಣಾ ಆಯೋಗವು ನೀಡಿರುವ ಮತದಾರರ ಗುರುತಿನ ಚೀಟಿಯಲ್ಲಿರುವ ಜನ್ಮ ದಿನಾಂಕವು ವಯಸ್ಸಿಗೆ ಸಂಬಂಧಿಸಿದ ದಾಖಲೆಯಾಗಿರುತ್ತದೆ.

## ನಿರ್ಗತಿಕ ವಿಧವಾ ವೇತನ ಯೋಜನೆ

ಹದಿನೆಂಟು ವರ್ಷಕ್ಕಿಂತ ಹೆಚ್ಚು ವಯಸ್ಸಿನ ನಿರ್ಗತಿಕ ವಿಧವೆಯರಿಗೆ ವಿಧವಾ ವೇತನವನ್ನು ಸರ್ಕಾರದ ಆದೇಶದ ಮೇರೆಗೆ 1ನೇ ಏಪ್ರಿಲ್ 1984 ರಿಂದ ಕಾರ್ಯಗತ ಮಾಡಲಾಗಿದೆ.

1. ನಿರ್ಗತಿಕ ವಿಧವೆ ಅಂದರೆ, ಪತ್ನಿಯು ಜೀವಿಸಿಲ್ಲದ ಅಥವಾ ಕಾನೂನು ರೀತ್ಯಾ ಮೃತಪಟ್ಟಿರುವನೆಂದು ಭಾವಿಸುವವನ ಪತ್ನಿ ಮತ್ತು ಅವಳ ಸಂಬಂಧಿಕರ ಆಶ್ರಯವಿಲ್ಲದ ಮತ್ತು ರೂ.6000/- ಗಳಿಗೆ ಮೀರದ ( ಆರು ಸಾವಿರ ರೂಪಾಯಿಗಳು) ವಾರ್ಷಿಕ ಆದಾಯವನ್ನು ಹೊಂದಿಲ್ಲದಿರುವ ಒಬ್ಬ ಸ್ತ್ರೀ.
2. ಅರ್ಜಿದಾರಳು ಅಥವಾ ಆಕೆಯ ಮರಣ ಹೊಂದಿದ ಪತಿಯು ಅರ್ಜಿ ದಿನಾಂಕದಿಂದ ಹಿಂದಿನ ನಿರಂತರ ಮೂರು ವರ್ಷಗಳ ಅವಧಿಗೆ ಕಡಿಮೆ ಇಲ್ಲದಂತೆ ಈ ರಾಜ್ಯದ ನಿವಾಸಿಯಾಗಿರಬೇಕು.
3. ವಿಧವಾ ವೇತನದ ಮೊಬಲಗು ತಿಂಗಳಿಗೆ 400/-
4. ವಿಧವಾ ವೇತನಕ್ಕಾಗಿ ಸಲ್ಲಿಸುವ ಅರ್ಜಿಯು ಗೊತ್ತುಪಡಿಸಿದ ನಮೂನೆಯಲ್ಲಿರಬೇಕು ಮತ್ತು ಅದನ್ನು ಸಂಬಂಧಪಟ್ಟ ತಾಲ್ಲೂಕಿನ ತಹಶೀಲ್ದಾರ್‌ರಿಗೆ ಸಲ್ಲಿಸಬೇಕು. ಬೇರೆ ಪಿಂಚಣಿ ಪಡೆಯುತ್ತಿರುವವರು ವಿಧವಾ ವೇತನದಡಿ ಅರ್ಹರಾಗುವುದಿಲ್ಲ.
5. ಮೃತರಾಗುವವರೆಗೆ ಅಥವಾ ಪುನರ್ವಿವಾಹವಾಗುವವರೆಗೆ, ಉದ್ಯೋಗ ಪಡೆದು ವಾರ್ಷಿಕ ಆದಾಯ ರೂ.6000/- ಕ್ಕಿಂತ ಹೆಚ್ಚಿಗೆ ಪಡೆಯುವವರೆಗೆ ಅಥವಾ ಗಂಡು ಮಕ್ಕಳಿದ್ದು, ಅವರು ವಯಸ್ಕರಾಗಿ ಪೋಷಿಸುವವರೆಗೆ ವಿಧವೆಯರು ವಿಧವಾ ವೇತನವನ್ನು ಪಡೆಯಬಹುದು.
6. ಜನನ ಪ್ರಮಾಣ ಪತ್ರ, ವೈದ್ಯಕೀಯ ದೃಢೀಕರಣ ಪತ್ರ ಅಥವಾ ಭಾರತ ಚುನಾವಣಾ ಆಯೋಗವು ನೀಡಿರುವ ಮತದಾರರ ಗುರುತಿನ ಚೀಟಿಯಲ್ಲಿರುವ ಜನ್ಮ ದಿನಾಂಕವು ವಯಸ್ಸಿಗೆ ಸಂಬಂಧಿಸಿದ ದಾಖಲೆಯಾಗಿರುತ್ತದೆ.

## ಅಂಗವಿಕಲರ ಮಾಸಾಶನ ಯೋಜನೆ:-

ಅಂಗವಿಕಲರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಹಾಗೂ ಅವರಿಗೆ ಆರ್ಥಿಕ ಭದ್ರತೆಯನ್ನೊದಗಿಸಲು ಕೆಳಕಂಡ ಅಂಗವಿಕಲತೆಯುಳ್ಳ, ರೂ.6000/- ಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ವರಮಾನವುಳ್ಳ ಅಂಗವಿಕಲತೆಯೊಂದಿಗೆ ಹುಟ್ಟಿದ ಮಗು ಮತ್ತು ಅಪಘಾತದಿಂದ ಅಂಗವಿಕಲತೆ ಉಂಟಾದ ವ್ಯಕ್ತಿಗಳು ಈ ಮಾಸಾಶನಕ್ಕೆ ಅರ್ಹರಾಗಿರುತ್ತಾರೆ.

ಅಂಗವಿಕಲ ವ್ಯಕ್ತಿಗಳ ( ಸಮಾನ ಅವಕಾಶ ಹಕ್ಕುಗಳ ಸಂರಕ್ಷಣೆ ಮತ್ತು ಪೂರ್ಣ ಭಾಗವಹಿಸುವಿಕೆ ) ಅಧಿನಿಯಮ 1995 ಅಧ್ಯಾಯ 1 ಭಾಗ 2(4)(ಟಿ) ರಲ್ಲಿ ಅಂಗವಿಕಲ ವ್ಯಕ್ತಿ ಎಂದರೆ ವೈದ್ಯಕೀಯ ಪ್ರಾಧಿಕಾರವು ಪ್ರಮಾಣೀಕರಿಸಿದ ರೀತಿಯಲ್ಲಿ ಯಾವುದೇ ಅಂಗವಿಕಲತೆಯಿಂದ ಶೇಕಡಾ 40 ಕ್ಕಿಂತ ಕಡಿಮೆ ಇರದಂತೆ ಅದರಿಂದ ಬಳಲುತ್ತಿರುವ ವ್ಯಕ್ತಿ

**ಅಂಗವಿಕಲತೆ ಎಂದರೆ -**

ಅ) ಅಂಧತ್ವ

ಆ) ಮಂದದೃಷ್ಟಿ

ಇ) ಕುಷ್ಠರೋಗ ನಿವಾರಿತರಾದವರು

ಈ) ಶ್ರವಣ ದೋಷವುಳ್ಳವರು

ಉ) ಚಲನವಲನ ಅಂಗವಿಕಲತೆ

ಊ) ಬುದ್ಧಿಮಾಂದ್ಯತೆ

ಋ) ಮಾನಸಿಕ ಅಸ್ವಸ್ಥತೆ

## ಸಂಧ್ಯಾ ಸುರಕ್ಷಾ ಯೋಜನೆ

65 ವರ್ಷದ ಅಥವಾ ಮೇಲ್ಪಟ್ಟ ವಯಸ್ಸಿನ ಹಿರಿಯ ಜೀವಿಗಳನ್ನು ಆರ್ಥಿಕ ಸಂಕಷ್ಟದಿಂದ ಪಾರು ಮಾಡುವ ದಿಸೆಯಲ್ಲಿ ಮಾಸಿಕ ರೂ.400-00 ರಂತೆ ದಿ:2-7-2007 ರಿಂದ ಮಾಸಾಶನಗಳನ್ನು ಪ್ರಾರಂಭಿಸಲಾಗಿದೆ.

**<u>ಕೆಳಕಂಡ ವ್ಯಕ್ತಿಗಳು ಈ ಮಾಸಾಶನವನ್ನು ಪಡೆಯಲು ಅರ್ಹರಾಗಿರುತ್ತಾರೆ.</u>**

ಅ) ಸಣ್ಣ ರೈತರು

ಆ) ಅತೀ ಸಣ್ಣ ರೈತರು

ಇ) ಕೃಷಿ ಕಾರ್ಮಿಕರು

ಈ) ನೇಕಾರರು

ಉ) ಮೀನುಗಾರರು

ಊ) ಅಸಂಘಟಿತ ವಲಯದ ಕಾರ್ಮಿಕರು, ಆದರೆ ಇದು " Building and other Construction workers " ( Regulation of Employment and Conditions of Services ) Act, 1966 ಅಡಿಯಲ್ಲಿ ಬರುವ ವ್ಯಕ್ತಿಗಳಿಗೆ ಅನ್ವಯಿಸುವುದಿಲ್ಲ ಮತ್ತು ಅದರಡಿ ಮಾಸಾಶನ ಪಡೆಯುವವರು ಈ ಯೋಜನೆಗೆ ಅರ್ಹರಾಗಿರುವುದಿಲ್ಲ.

**<u>ಈ ಕೆಳಗಿನ ವರ್ಗದವರನ್ನು ಅಸಂಘಟಿತ ವಲಯದ ಕಾರ್ಮಿಕರಲ್ಲಿ ಸೇರಿಸಲಾಗಿದೆ.</u>**

1) ಹೋಟೆಲ್ ಕಾರ್ಮಿಕರು
2) ಅಗರಭತ್ತಿ ಕಾರ್ಮಿಕರು
3) ಕಾರ್ಪೆಂಟರಿ / ಟಿಂಬರ್ ಕಾರ್ಮಿಕರು
4) ಸ್ಟೋನ್ ಕಟರ್ಸ್
5) ಸೆಕ್ಯುರಿಟಿ ಏಜೆನ್ಸಿ ಕಾರ್ಮಿಕರು
6) ಅಂಗಡಿ ಮತ್ತು ವಾಣಿಜ್ಯದ ಅನಿಶ್ಚಿತ ಕಾರ್ಮಿಕರು
7) ಚರ್ಮ ಕೆಲಸಗಾರರು

8) ಮನೆಗೆಲಸದವರು
9) ಮಾರುವವರು ( ವೆಂಡರ್ಸ್ )

**ನಿಬಂಧನೆಗಳು**

1. ಪತಿ , ಪತ್ನಿಯ ಸಂಯೋಜಿತ ವಾರ್ಷಿಕ ಆದಾಯ ರೂ.20,000-00 ಕ್ಕಿಂತ ಹೆಚ್ಚಿಗೆ ಇರಕೂಡದು.
2. ಫಲಾನುಭವಿಗಳು ಪತಿ ಅಥವಾ ಪತ್ನಿಯ ಸಂಯೋಜಿತ ಠೇವಣಿ ಮೌಲ್ಯ ರೂ.10,000-00 ಕ್ಕಿಂತ ಹೆಚ್ಚಿಗೆ ಇರಬಾರದು.
3. ಯಾವುದೇ ರೀತಿಯ ಪಿಂಚಣಿಯನ್ನು ಸಾರ್ವಜನಿಕ / ಖಾಸಗಿ ಮೂಲದಿಂದ ಪಡೆಯುತ್ತಿರಬಾರದು.
4. ಫಲಾನುಭವಿಗಳಿಗೆ ಗಂಡು ಮಕ್ಕಳು ಇದ್ದರೂ ಸಹ ಇವರುಗಳು ಫಲಾನುಭವಿಗಳನ್ನು ಪೋಷಿಸದೆ ಇದ್ದಲ್ಲಿ ಈ ಯೋಜನೆಯಡಿ ಮಾಸಾಶನಕ್ಕೆ ಅರ್ಹರಾಗಿರುತ್ತಾರೆ.
5. ಜನನ ಪ್ರಮಾಣ ಪತ್ರ, ವೈದ್ಯಕೀಯ ದೃಢೀಕರಣ ಪತ್ರ ಅಥವಾ ಭಾರತ ಚುನಾವಣಾ ಆಯೋಗವು ನೀಡಿರುವ ಮತದಾರರ ಗುರುತಿನ ಚೀಟಿಯಲ್ಲಿನ ಜನ್ಮ ದಿನಾಂಕವು ವಯಸ್ಸಿಗೆ ಸಂಬಂಧಿಸಿದ ದಾಖಲೆಯಾಗಿದೆ.

**ದೇವದಾಸಿಯರಿಗೆ ಮಾಸಾಶನ ಯೋಜನೆ**

1993-94 ನೇ ಸಾಲಿನಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯು ಬೆಳಗಾವಿ, ಬಿಜಾಪುರ, ಬಾಗಲಕೋಟೆ, ಬಳ್ಳಾರಿ, ಕೊಪ್ಪಳ, ರಾಯಚೂರು, ಗುಲ್ಬರ್ಗಾ, ಧಾರವಾಡ ಮತ್ತು ಗದಗ ಜಿಲ್ಲೆಗಳಲ್ಲಿ ನಡೆಸಿದ ಸಮೀಕ್ಷೆಯಲ್ಲಿ ಹಾಗೂ ಪುನರ್ ಖಾತರೀಕರಣದಲ್ಲಿ ಗುರುತಿಸಲ್ಪಟ್ಟ ದೇವದಾಸಿಯರು ಮಾತ್ರ ಮಾಸಾಶನಕ್ಕೆ ಅರ್ಹರಿರುತ್ತಾರೆ.

**ನಿಬಂಧನೆಗಳು:**

1. ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರತಕ್ಕದ್ದು.
2. ಅರ್ಜಿದಾರರ ವಯಸ್ಸು 45 ವರ್ಷಕ್ಕಿಂತ ಮೇಲ್ಪಟ್ಟಿರಬೇಕು.
3. ಮಾಸಾಶನದ ಮೊಬಲಗು ರೂ.400-00 ಗಳಾಗಿರುತ್ತದೆ.
4. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಶಿಸು ಅಭಿವೃದ್ಧಿ ಅಧಿಕಾರಿಗಳು ಈ ಮಾಸಾಶನದ ಮಂಜೂರಾತಿ ಅಧಿಕಾರಿಯಾಗಿರುತ್ತಾರೆ.
5. ತಾಲ್ಲೂಕಿನ ತಹಶೀಲ್ದಾರ್‌ರು ಈ ಕಾರ್ಯಕ್ರಮದ ಉಸ್ತುವಾರಿ ಅಧಿಕಾರಿಯಾಗಿರುತ್ತಾರೆ.
6. ಜನನ ಪ್ರಮಾಣ ಪತ್ರ, ವೈದ್ಯಕೀಯ ದೃಢೀಕರಣ ಪತ್ರ ಅಥವಾ ಭಾರತ ಚುನಾವಣಾ ಆಯೋಗವು ನೀಡಿರುವ ಮತದಾರರ ಗುರುತಿನ ಚೀಟಿಯಲ್ಲಿರುವ ಜನ್ಮ ದಿನಾಂಕವು ವಯಸ್ಸಿಗೆ ಸಂಬಂಧಿಸಿದ ದಾಖಲೆಯಾಗಿದೆ.

**ಅಂತ್ಯ ಸಂಸ್ಕಾರ ಸಹಾಯನಿಧಿ ಯೋಜನೆ**

ಬಡತನ ರೇಖೆಗಿಂತ ಕೆಳಮಟ್ಟದಲ್ಲಿರುವ ಕುಟುಂಬದ ಸದಸ್ಯರು ಮೃತಪಟ್ಟಲ್ಲಿ ಅವರ ಅಂತಿಮ ಕ್ರಿಯೆಗಾಗಿ ತಲಾ ಒಂದು ಸಾವಿರ ರೂ.ಗಳನ್ನು ಅಂತ್ಯ ಸಂಸ್ಕಾರ ಸಹಾಯ ನಿಧಿ ಯೋಜನೆಯಡಿ ನೀಡಲಾಗುವುದು. ಈ ಯೋಜನೆಯನ್ನು ಅಂತ್ಯ ಸಂಸ್ಕಾರ ಸಹಾಯ ನಿಧಿ ಎಂದು ಕರೆಯಲಾಗಿದೆ.

ಈ ನೆರವನ್ನು ಜೀವಂತ ವಾರಸುದಾರರಿಗೆ ಅಥವಾ ಕುಟುಂಬದ ಅವಲಂಬಿತ ಸದಸ್ಯರಿಗೆ ಅಥವಾ ಅವರ ಅಂತ್ಯಕ್ರಿಯೆ ನೆರವೇರಿಸುವ ಜವಾಬ್ದಾರಿ ಇರುವ ಸದಸ್ಯರಿಗೆ ಅಂತ್ಯ ಕ್ರಿಯೆ ನೆರವೇರಿಸುತ್ತಾರೆಂದು ಖಚಿತಪಡಿಸಿಕೊಂಡು ತಾಲ್ಲೂಕು ತಹಶೀಲ್ದಾರ್‌ರು ರೂ.1000-00 ಗಳನ್ನು ಬಿಡುಗಡೆ ಮಾಡಬಹುದು.

**ಅನ್ನಪೂರ್ಣ ಯೋಜನೆ**

ನಿರ್ಗತಿಕ ವ್ಯಕ್ತಿಗಳಿಗೆ ಆಹಾರ ಭದ್ರತೆಯನ್ನು ಒದಗಿಸುವ ಸಲುವಾಗಿ ಕೇಂದ್ರ ಸರ್ಕಾರವು , ರಾಜ್ಯ ಸರ್ಕಾರದ ಸಹಯೋಗದೊಂದಿಗೆ ಅನ್ನಪೂರ್ಣ ಯೋಜನೆಯನ್ನು ಜಾರಿಗೆ ತಂದಿದೆ.

## ನಿಬಂಧನೆಗಳು

1. 65 ವರ್ಷ ಅಥವಾ ಅದಕ್ಕಿಂತ ಮೇಲ್ಪಟ್ಟ ನಿರ್ಗತಿಕ ವ್ಯಕ್ತಿಗಳು ಯೋಜನೆಯಡಿ ಫಲಾನುಭವಿ ಗಳಾಗಿರುತ್ತಾರೆ.
2. ಯೋಜನೆಯ ಅನುಸಾರ ಫಲಾನುಭವಿಗಳಿಗೆ 10 ಕಿ.ಗ್ರಾಂ. ಅಕ್ಕಿಯನ್ನು ಪ್ರತಿ ತಿಂಗಳು ಉಚಿತವಾಗಿ ವಿತರಿಸಲಾಗುವುದು.
3. ಈಗಾಗಲೇ ಇತರೆ ಸಾಮಾಜಿಕ ಭದ್ರತಾ ಯೋಜನೆಯಡಿ ಫಲಾನುಭವಿಗಳಾಗಿದ್ದರೆ ಈ ಯೋಜನೆಯಡಿ ಅರ್ಹರಾಗುವುದಿಲ್ಲ.

## ರಾಷ್ಟ್ರೀಯ ಕುಟುಂಬ ನೆರವು ಯೋಜನೆ

ರಾಷ್ಟ್ರೀಯ ಸಾಮಾಜಿಕ ನೆರವು ಯೋಜನೆಯಡಿ (NSAP) ರಾಷ್ಟ್ರೀಯ ಕುಟುಂಬ ನೆರವು ಯೋಜನೆ ಕೇಂದ್ರ ಸಹಾಯ ಧನ ಲಭ್ಯವಿದ್ದು, ಇದರನ್ವಯ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದ ಮುಖ್ಯಸ್ಥನ ಮರಣವಾದಲ್ಲಿ ಒಂದು ಬಾರಿಯ ಸಹಾಯಧನವನ್ನು ನೀಡಲಾಗುವುದು.

## ನಿಬಂಧನೆಗಳು

1. ಕುಟುಂಬ ಮುಖ್ಯಸ್ಥನ ದುಡಿಮೆಯ ಕುಟುಂಬದ ಒಟ್ಟು ದುಡಿಮೆಯ ಗಣನೀಯ ಪ್ರಮಾಣದ್ದಾಗಿರಬೇಕು.
2. ಮರಣದ ಸಮಯದಲ್ಲಿ ಕುಟುಂಬದ ಮುಖ್ಯಸ್ಥನ ವಯಸ್ಸು 18 ಕ್ಕಿಂತ ಹೆಚ್ಚಿಗೆ ಮತ್ತು 65 ಕ್ಕಿಂತ ಕಡಿಮೆ ಇರಬೇಕು.
3. ಈ ಯೋಜನೆಯಡಿ ಒಂದು ಬಾರಿ ರೂ.10,000-00 ದ ನೆರವು ಲಭ್ಯವಾಗಲಿದೆ.
4. ಅರ್ಜಿಯನ್ನು ಬಿಪಿಎಲ್ ಕುಟುಂಬದ ಜೀವಂತವಿರುವ ವಾರಸುದಾರನು / ಳು ಸಲ್ಲಿಸಬೇಕು.

## ಆದರ್ಶ ವಿವಾಹ ಯೋಜನೆ

ರಾಜ್ಯದಲ್ಲಿ ಸರಳ ಸಾಮೂಹಿಕ ವಿವಾಹಗಳನ್ನು ಜನಪ್ರಿಯಗೊಳಿಸಲು ಕನಿಷ್ಟ 25 ವಿವಾಹಗಳು ನಡೆದ ಕಾರ್ಯಕ್ರಮಕ್ಕೆ ಪ್ರತಿ ವಿವಾಹಕ್ಕೆ 2 ವರ್ಷದ ಠೇವಣಿ ರೂಪದಲ್ಲಿ ರೂ.10,000-00 ಪ್ರೋತ್ಸಾಹ ಧನ ನೀಡಲು ದಿನಾಂಕ:2-2-2007 ರಿಂದ ಯೋಜನೆಗಳನ್ನು ರೂಪಿಸಲಾಗಿದೆ.

## ನಿಬಂಧನೆಗಳು

1. ಇಂತಹ ಕಾರ್ಯಕ್ರಮದಲ್ಲಿ ವಿವಾಹವಾಗುವ ಜೋಡಿಯಲ್ಲಿ ವಧುವಿನ ಹೆಸರಿನಲ್ಲಿ ರೂ.10,000-00ಗಳನ್ನು 2 ವರ್ಷಗಳ ನಿಶ್ಚಿತ ಠೇವಣಿಯಲ್ಲಿ ಇಡಲಾಗುವುದು.
2. ಅಂತರ್‌ಜಾತಿ ವಿವಾಹಗಳಿಗೆ ಈ ಯೋಜನೆಯಲ್ಲಿ ಅವಕಾಶವಿದ್ದು, ಎರಡು ಪ್ರೋತ್ಸಾಹ ಧನಗಳನ್ನು ಒಟ್ಟಿಗೆ ಇಡಲಾಗುವುದು.
3. ಸಾಮೂಹಿಕ ವಿವಾಹಗಳ ಸಂಘಟನಾಕಾರರಿಗೆ ಪ್ರತಿ ಜೋಡಿಗೆ ರೂ.100-00 ರಂತೆ ಪ್ರೋತ್ಸಾಹ ಧನ ನೀಡಲಾಗುವುದು.
4. ವಿವಾಹಕ್ಕೆ ಅರ್ಹರಾದ ವಯಸ್ಸಿನವರಾಗಿದ್ದು ( ಕನಿಷ್ಠ ವಯೋಮಿತಿ ) ಈ ಮೊದಲೇ ಮದುವೆಯಾಗಿ ಜೀವಂತ ಪತಿ ಅಥವಾ ಪತ್ನಿ ಇರಬಾರದು.
5. ಪ್ರೋತ್ಸಾಹ ಧನ ಪಡೆಯಲು ವಿವಾಹವನ್ನು ನೋಂದಣಿ ಮಾಡಿಸುವುದು ಕಡ್ಡಾಯವಾಗಿದೆ.
6. ಪ್ರತಿ ಅರ್ಜಿಯ ಜೊತೆಯಲ್ಲಿ ಅಗತ್ಯವಿರುವ ಪ್ರಮಾಣ ಪತ್ರಗಳು ವಿವಾಹದ ಭಾವಚಿತ್ರದ ಪಾಸಿಟಿವ್ ಮತ್ತು ನೆಗಟಿವ್ ಮುಂತಾದವುಗಳನ್ನು ಲಗತ್ತಿಸಬೇಕು.
7. ವಿವಾಹ ಮುಗಿದ ಒಂದು ವಾರದಲ್ಲಿ ಹಣವನ್ನು ವಧುವಿಗೆ ಅನುಕೂಲಕರವಾದ ಬ್ಯಾಂಕ್ ಶಾಖೆಯಲ್ಲಿ ನಿಶ್ಚಿತ ಠೇವಣಿಯಲ್ಲಿ ವಧುವಿನ ಹೆಸರಿನಲ್ಲಿಟ್ಟು ವಧುವಿಗೆ ರಶೀತಿಯನ್ನು ನೀಡಲಾಗುವುದು.

**ವಿವಿಧ ಯೋಜನೆಯಡಿಯಲ್ಲಿ ಮೈಸೂರು ವಿಭಾಗದ ಜಿಲ್ಲೆಗಳಿಗೆ 2008-09ಸಾಲಿನಲ್ಲಿ ಡಿಸೆಂಬರ್ 2008 ರವರೆಗೆ ಬಿಡುಗಡೆಯಾಗಿರುವ ಅನುದಾನದ ವಿವರ**

| ಕ್ರ. ಸಂ. | ಜಿಲ್ಲೆಯ ಹೆಸರು | ಒಟ್ಟು ಬಿಡುಗಡೆಯಾದ ಅನುದಾನ | | |
|---|---|---|---|---|
| | | ರಾಷ್ಟ್ರೀಯ ಕುಟುಂಬ ನೆರವು ಯೋಜನೆ | ಆಮ್ ಆದ್ಮಿ ವಿಮಾ ಯೋಜನೆ | ಅಂತ್ಯ ಸಂಸ್ಕಾರ ನಿಧಿ |
| 1 | ಮೈಸೂರು | 8.00 | 1.00 | 15.00 |
| 2 | ಮಂಡ್ಯ | 38.00 | 1.00 | 17.00 |
| 3 | ಚಾ. ನಗರ | 5.30 | 1.00 | 17.00 |
| 4 | ಹಾಸನ | 134.00 | 1.00 | 24.00 |
| 5 | ಚಿಕ್ಕಮಗಳೂರು | 39.00 | 1.00 | 12.00 |
| 6 | ಕೊಡಗು | 16.00 | 1.00 | 10.00 |
| 7 | ದಕ್ಷಿಣ ಕನ್ನಡ | 90.00 | 1.00 | 17.00 |
| 8 | ಉಡುಪಿ | 44.70 | 1.00 | 13.00 |
| | **ಒಟ್ಟು** | **375.00** | **8.00** | **125.00** |